# ಕಾಂಗ್ರೆಸ್ ಶಾಸಕ ಯಶವಂತ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಬೆಂಬಲಿಗರ ಒತ್ತಾಯ!


**ಬೆಂಗಳೂರು:** ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಚರ್ಚೆಗಳು ತೀವ್ರಗೊಂಡಿರುವ ಬೆನ್ನಲ್ಲೇ ವಿಜಯಪುರ ಜಿಲ್ಲೆಯ ಇಂಡಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ವಿಠಲಗೌಡ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸದ ಎದುರು ಜಮಾಯಿಸಿದರು. ತಮ್ಮ ನಾಯಕರಿಗೆ ಸಚಿವ ಸ್ಥಾನ ನೀಡಬೇಕೆಂಬ ಬೇಡಿಕೆಯನ್ನು ನೇರವಾಗಿ ಮುಖ್ಯಮಂತ್ರಿಗಳಿಗೆ ತಲುಪಿಸುವ ಉದ್ದೇಶದಿಂದ ಬೆಂಬಲಿಗರು ಬೆಂಗಳೂರಿಗೆ ಆಗಮಿಸಿದ್ದರು.

ಕಾರ್ಯಕರ್ತರ ಪ್ರಕಾರ, ಯಶವಂತರಾಯಗೌಡ ಪಾಟೀಲ್ ಅವರು ಹಲವು ವರ್ಷಗಳಿಂದ ಪಕ್ಷ ಸಂಘಟನೆಗಾಗಿ ದುಡಿದಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಬಲವರ್ಧನೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಪಕ್ಷ ಸೂಕ್ತ ಗೌರವ ನೀಡಬೇಕು ಎಂಬುದು ಬೆಂಬಲಿಗರ ಒತ್ತಾಯವಾಗಿದೆ.

"ನಾವು ಒಂದೇ ಉದ್ದೇಶದಿಂದ ಇಲ್ಲಿಗೆ ಬಂದಿದ್ದೇವೆ. ಯಶವಂತರಾಯಗೌಡ ಪಾಟೀಲ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸುತ್ತಿದ್ದೇವೆ. ಅವರ ಮೇಲೆ ನಮಗೆ ಸಂಪೂರ್ಣ ವಿಶ್ವಾಸವಿದೆ. ನಮ್ಮ ನಾಯಕರಿಗೆ ನ್ಯಾಯ ದೊರೆಯಲಿದೆ ಎಂಬ ನಂಬಿಕೆ ಇದೆ" ಎಂದು ಬೆಂಬಲಿಗರು ತಿಳಿಸಿದ್ದಾರೆ.

ಬೆಂಬಲಿಗರ ಹೇಳಿಕೆಯಂತೆ, ಸುಮಾರು 2,000ಕ್ಕೂ ಹೆಚ್ಚು ಕಾರ್ಯಕರ್ತರು ವಿವಿಧ ಭಾಗಗಳಿಂದ ಆಗಮಿಸಿ ತಮ್ಮ ನಾಯಕರ ಪರ ಘೋಷಣೆ ಕೂಗಿ ಬೆಂಬಲ ವ್ಯಕ್ತಪಡಿಸಿದರು. ಸಂಪುಟ ವಿಸ್ತರಣೆ ಕುರಿತ ಚರ್ಚೆಗಳು ನಡೆಯುತ್ತಿರುವ ಹೊತ್ತಿನಲ್ಲಿ ನಡೆದ ಈ ಬೆಳವಣಿಗೆ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.

**ಉತ್ತರ ಕರ್ನಾಟಕಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಆಗ್ರಹ:** ರಾಜ್ಯ ಸಚಿವ ಸಂಪುಟದಲ್ಲಿ ಉತ್ತರ ಕರ್ನಾಟಕ ಭಾಗಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು ಎಂಬ ಬೇಡಿಕೆ ಹಲವು ದಿನಗಳಿಂದ ಕೇಳಿಬರುತ್ತಿದೆ. ಈ ಭಾಗದ ಹಲವು ಕಾಂಗ್ರೆಸ್ ಶಾಸಕರು ಸಚಿವ ಸ್ಥಾನದ ಆಕಾಂಕ್ಷಿಗಳಾಗಿದ್ದು, ಪ್ರಾದೇಶಿಕ ಸಮತೋಲನ ಕಾಯ್ದುಕೊಳ್ಳುವ ಸವಾಲು ಪಕ್ಷದ ವರಿಷ್ಠರ ಮುಂದಿದೆ.



ಯಶವಂತರಾಯಗೌಡ ಪಾಟೀಲ್ ಅವರ ಬೆಂಬಲಿಗರು ಕೂಡ ಇದೇ ವಿಚಾರವನ್ನು ಮುಂದಿಟ್ಟಿದ್ದು, ಉತ್ತರ ಕರ್ನಾಟಕ ಭಾಗದ ನಾಯಕತ್ವಕ್ಕೆ ಹೆಚ್ಚಿನ ಅವಕಾಶ ನೀಡಬೇಕೆಂದು ಆಗ್ರಹಿಸಿದ್ದಾರೆ. ಮುಂಬರುವ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಪಕ್ಷ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

**ಸಂಪುಟ ವಿಸ್ತರಣೆ ಕುರಿತು ಜೋರಾದ ಚರ್ಚೆ:** ರಾಜ್ಯದಲ್ಲಿ ಹೊಸ ಸರ್ಕಾರ ರಚನೆಯಾದ ಬಳಿಕ ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆ ಕುರಿತ ಚರ್ಚೆಗಳು ಕಾಂಗ್ರೆಸ್ ವಲಯದಲ್ಲಿ ಚುರುಕುಗೊಂಡಿವೆ. ಹಲವು ಹಿರಿಯ ಹಾಗೂ ಪ್ರಭಾವಿ ಶಾಸಕರು ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದು, ಪಕ್ಷದ ವರಿಷ್ಠರು ವಿವಿಧ ಆಯ್ಕೆಗಳನ್ನು ಪರಿಗಣಿಸುತ್ತಿದ್ದಾರೆ ಎನ್ನಲಾಗಿದೆ.

ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಇತ್ತೀಚೆಗೆ ಶಾಸಕರ ಆಕಾಂಕ್ಷೆಗಳ ಕುರಿತು ಪ್ರತಿಕ್ರಿಯಿಸಿ, ಸಚಿವ ಸ್ಥಾನ ಬಯಸುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದ್ದರು.

"ಪ್ರಭಾರ ಪ್ರಧಾನ ಕಾರ್ಯದರ್ಶಿಯಾಗಿ ಹಾಗೂ ಕಾಂಗ್ರೆಸ್ ಕಾರ್ಯಕರ್ತನಾಗಿ ನಾನು ಶಾಸಕರ ಆಕಾಂಕ್ಷೆಗಳನ್ನು ಗೌರವಿಸುತ್ತೇನೆ. ಸಚಿವ ಸ್ಥಾನ ಬಯಸುವುದು ಸಹಜ ಪ್ರಕ್ರಿಯೆ" ಎಂದು ಅವರು ಅಭಿಪ್ರಾಯಪಟ್ಟಿದ್ದರು.

**ಹಲವರ ಹೆಸರುಗಳು ರೇಸ್‌ನಲ್ಲಿ:** ಸಚಿವ ಸಂಪುಟ ವಿಸ್ತರಣೆಯ ಹಿನ್ನೆಲೆಯಲ್ಲಿ ಹಲವು ಕಾಂಗ್ರೆಸ್ ನಾಯಕರು ತಮ್ಮ ಹೆಸರುಗಳು ಪರಿಗಣನೆಯಲ್ಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ. ಶಾಸಕರಾದ ಸಲೀಮ್ ಅಹ್ಮದ್, ಅಬ್ಬಯ್ಯ ಪ್ರಸಾದ್ ಸೇರಿದಂತೆ ಅನೇಕ ನಾಯಕರು ಸಚಿವ ಸ್ಥಾನಕ್ಕಾಗಿ ಪ್ರಯತ್ನ ನಡೆಸುತ್ತಿದ್ದಾರೆ ಎನ್ನಲಾಗುತ್ತಿದೆ.

ಇದರ ನಡುವೆ, ವಿವಿಧ ಸಮುದಾಯಗಳು ಮತ್ತು ಪ್ರದೇಶಗಳಿಗೆ ಸಮಾನ ಪ್ರಾತಿನಿಧ್ಯ ನೀಡುವ ನಿಟ್ಟಿನಲ್ಲಿ ಕಾಂಗ್ರೆಸ್ ನಾಯಕತ್ವ ಸಮತೋಲನದ ಲೆಕ್ಕಾಚಾರದಲ್ಲಿ ತೊಡಗಿದೆ ಎಂಬ ಮಾತುಗಳೂ ಕೇಳಿಬರುತ್ತಿವೆ.

**ವಿಚಿಸ್ತರಣೆಗೆ ಇನ್ನೂ ಸಾಕಷ್ಟು ಅವಕಾಶ:** ಪ್ರಸ್ತುತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಸೇರಿದಂತೆ 14 ಮಂದಿ ಸದಸ್ಯರಿದ್ದಾರೆ. ಸಂವಿಧಾನದ ಪ್ರಕಾರ ರಾಜ್ಯ ಸಚಿವ ಸಂಪುಟದಲ್ಲಿ ಗರಿಷ್ಠ 34 ಸಚಿವರನ್ನು ಹೊಂದಲು ಅವಕಾಶವಿರುವುದರಿಂದ ಇನ್ನೂ ಹಲವು ಸ್ಥಾನಗಳು ಖಾಲಿ ಇವೆ.

ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ನಡೆಯಲಿರುವ ಸಚಿವ ಸಂಪುಟ ವಿಸ್ತರಣೆ ಕಾಂಗ್ರೆಸ್ ಪಕ್ಷದ ಒಳರಾಜಕೀಯ ಸಮೀಕರಣಗಳಿಗೆ ಹೊಸ ತಿರುವು ನೀಡುವ ಸಾಧ್ಯತೆ ಇದೆ. ಯಾರಿಗೆ ಸಚಿವ ಸ್ಥಾನ ಸಿಗಲಿದೆ, ಯಾರಿಗೆ ನಿರಾಸೆಯಾಗಲಿದೆ ಎಂಬುದರ ಬಗ್ಗೆ ಪಕ್ಷದ ನಾಯಕರು ಮತ್ತು ಕಾರ್ಯಕರ್ತರಲ್ಲಿ ಭಾರೀ ಕುತೂಹಲ ಮನೆ ಮಾಡಿದೆ.

ಸಚಿವ ಸಂಪುಟ ವಿಸ್ತರಣೆಗೆ ಕ್ಷಣಗಣನೆ ಆರಂಭವಾಗಿರುವ ಬೆನ್ನಲ್ಲೇ ಶಾಸಕ ಯಶವಂತರಾಯಗೌಡ ಪಾಟೀಲ್ ಪರ ಬೆಂಬಲಿಗರ ಶಕ್ತಿ ಪ್ರದರ್ಶನ ಕಾಂಗ್ರೆಸ್‌ನಲ್ಲಿ ಸಚಿವ ಸ್ಥಾನಕ್ಕಾಗಿ ನಡೆಯುತ್ತಿರುವ ಪೈಪೋಟಿಗೆ ಮತ್ತಷ್ಟು ವೇಗ ನೀಡಿದೆ. ಇದೀಗ ಸಚಿವ ಸಂಪುಟ ವಿಸ್ತರಣೆ ಕುರಿತು ಅಂತಿಮ ನಿರ್ಧಾರ ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಚರ್ಚೆಯ ಬಳಿಕವೇ ಹೊರಬೀಳುವ ಸಾಧ್ಯತೆ ಇದೆ. ಪ್ರಾದೇಶಿಕ, ಜಾತಿ ಮತ್ತು ರಾಜಕೀಯ ಸಮತೋಲನದ ಲೆಕ್ಕಾಚಾರದ ನಡುವೆ ಯಾರಿಗೆ ಸಚಿವ ಸ್ಥಾನ ಸಿಗಲಿದೆ ಎಂಬುದು ಮುಂದಿನ ದಿನಗಳಲ್ಲಿ ಸ್ಪಷ್ಟವಾಗಲಿದ್ದು, ಸಚಿವಾಕಾಂಕ್ಷಿಗಳ ರಾಜಕೀಯ ಚಟುವಟಿಕೆಗಳು ಮಾತ್ರ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿವೆ. ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಕಸರತ್ತು ಅಂತಿಮ ಹಂತ ತಲುಪುತ್ತಿರುವ ಬೆನ್ನಲ್ಲೇ ಸಚಿವಾಕಾಂಕ್ಷಿಗಳ ಚಟುವಟಿಕೆಗಳು ಮತ್ತಷ್ಟು ಚುರುಕುಗೊಂಡಿವೆ. ಬೆಂಬಲಿಗರ ಶಕ್ತಿ ಪ್ರದರ್ಶನ, ಪ್ರಾದೇಶಿಕ ಪ್ರಾತಿನಿಧ್ಯ ಮತ್ತು ಸಾಮಾಜಿಕ ಸಮೀಕರಣಗಳ ನಡುವೆ ಕಾಂಗ್ರೆಸ್ ನಾಯಕತ್ವದ ಮುಂದಿರುವ ಸವಾಲು ಹೆಚ್ಚಾಗಿದೆ. ಉತ್ತರ ಕರ್ನಾಟಕ ಭಾಗಕ್ಕೆ ಸೂಕ್ತ ಪ್ರಾತಿನಿಧ್ಯ ಸಿಗುತ್ತದೆಯೇ? ಯಶವಂತರಾಯಗೌಡ ಪಾಟೀಲ್ ಅವರಂತಹ ಹಿರಿಯ ಶಾಸಕರಿಗೆ ಸಚಿವ ಸ್ಥಾನ ಲಭಿಸುತ್ತದೆಯೇ? ಎಂಬ ಪ್ರಶ್ನೆಗಳಿಗೆ ಶೀಘ್ರದಲ್ಲೇ ಉತ್ತರ ಸಿಗುವ ಸಾಧ್ಯತೆ ಇದೆ. ಹೈಕಮಾಂಡ್ ನಿರ್ಧಾರದತ್ತ ನಾಯಕರು ಹಾಗೂ ಕಾರ್ಯಕರ್ತರು ಕಾತರದಿಂದ ಕಾಯುತ್ತಿದ್ದು, ಮುಂಬರುವ ಸಂಪುಟ ವಿಸ್ತರಣೆ ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆಗೆ ಕಾರಣವಾಗುವ ನಿರೀಕ್ಷೆಯಿದೆ.

# ಟೋಲ್ ಸಮಸ್ಯೆಗಳ ಕುರಿತು ದಾಬಸ್ಪೇಟೆ ಸಿಐಗೆ ಕರವೇ ಕನ್ನಡಸೇನೆ ಮನವಿ



**ನೆಲಮಂಗಲ:** ಕರ್ನಾಟಕ ರಕ್ಷಣಾ ವೇದಿಕೆ ಕನ್ನಡಸೇನೆ ವತಿಯಿಂದ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ಶ್ರೀ ಪ್ರಕಾಶ್ ಸಿ.ಎನ್., ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾರ್ಮಿಕ ಘಟಕದ ಅಧ್ಯಕ್ಷರಾದ ರಾಮಾಂಜಿನಪ್ಪ ಆರ್., ಸೋಂಪುರ ಹೋಬಳಿ ಅಧ್ಯಕ್ಷರಾದ ಜೈಪ್ರಕಾಶ್ ಸಿ., ಸೋಂಪುರ ಯುವ ಘಟಕದ ಅಧ್ಯಕ್ಷರಾದ ಧನಂಜಯ ವೈ.ಎನ್., ರಂಗನಾಥ್ ಹಾಗೂ ಸಂಘಟನೆಯ ಇತರ ಪದಾಧಿಕಾರಿಗಳು ದಾಬಸ್ಪೇಟೆ ಆರಕ್ಷಕ ಠಾಣೆಯ ನೂತನ ಸರ್ಕಲ್ ಇನ್ಸ್ಪೆಕ್ಟರ್ ಧರ್ಮೇಂದ್ರ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಕೆಂಪೋಹಳ್ಳಿ ಟೋಲ್ ಪ್ಲಾಜಾದಲ್ಲಿನ ಮೂಲಭೂತ ಸೌಕರ್ಯಗಳ ಕೊರತೆ, ರಸ್ತೆ ದುರಸ್ತಿ ಕಾಮಗಾರಿಗಳ ಅವ್ಯವಸ್ಥೆ, ಸಿಬ್ಬಂದಿಯ ಅನುಚಿತ ವರ್ತನೆ ಹಾಗೂ ಸಾರ್ವಜನಿಕರಿಗೆ ಉಂಟಾಗುತ್ತಿರುವ ತೊಂದರೆಗಳ ಕುರಿತು ಈ ವೇಳೆ ಅಧಿಕಾರಿಗಳ ಗಮನ ಸೆಳೆಯಲಾಯಿತು.

ಮನವಿಗೆ ಸ್ಪಂದಿಸಿದ ಸಿಐ ಧರ್ಮೇಂದ್ರ ಅವರು ಟೋಲ್ ಪ್ಲಾಜಾ ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ, ಶೀಘ್ರದಲ್ಲೇ ನೇರ ಮಾತುಕತೆಯ ಮೂಲಕ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು ಎಂದು ಕರವೇ ಕನ್ನಡಸೇನೆ ಪದಾಧಿಕಾರಿಗಳು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆಯ ವಿವಿಧ ಘಟಕಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.


RAJARATHA CYBER

All Online Services Under One Roof!

- Aadhaar, PAN Card, Voter ID, Ration Card
- e-Khata, Senior Citizen Card
- & Other Government Services
- Address: Junior College Road, Nelamangala

Contact: 9886926812 for medicts


# ದೀಪಿಕಾ ಸ್ಥಾನ ತುಂಬಲಿದ್ದಾರಂತೆ ಸಾಯಿ ಪಲ್ಲವಿ

**ಹೈದರಾಬಾದ್:** 2024ರಲ್ಲಿ ಬಿಡುಗ ಡೆಯಾಗಿ ಭಾರೀ ಯಶಸ್ಸು ಕಂಡ 'ಕಲ್ಕಿ 2898 ಎಡಿ' ಸಿನಿಮಾದ ಸಿಕ್ವೆಲ್ ಬಗ್ಗೆ ಹಲವು ತಿಂಗಳಿಂದ ಚರ್ಚೆ ನಡೆಯುತ್ತಿದೆ. ನಿರ್ದೇಶಕ ನಾಗ್ ಅಶ್ವಿನ್ ಈಗಾಗಲೇ 'ಕಲ್ಕಿ 2' ಚಿತ್ರದ ಎರಡು ಹಂತದ ಚಿತ್ರೀಕರಣ ಪೂರ್ಣಗೊಳಿಸಿದ್ದು, ಚಿತ್ರದ ನಾಯಕಿ ಯಾರು ಎಂಬ ಪ್ರಶ್ನೆ ಅಭಿಮಾನಿಗಳಲ್ಲಿ ಕುತೂಹಲ ಮೂಡಿಸಿದೆ.

ಮೊದಲ ಭಾಗದಲ್ಲಿ ಕಲ್ಕಿಯ ತಾಯಿ ಸುಮತಿ ಪಾತ್ರದಲ್ಲಿ ನಟಿ ದೀಪಿಕಾ ಪಡುಕೋಣೆ ಕಾಣಿಸಿಕೊಂಡಿದ್ದರು. ಆದರೆ ಇತ್ತೀಚಿನ ವರದಿಗಳ ಪ್ರಕಾರ, ದೀಪಿಕಾ ಸಿಕ್ವೆಲ್‌ನಿಂದ ಹೊರಬಂದಿದ್ದಾರೆ ಎನ್ನಲಾಗಿದ್ದು, ಅವರ ಸ್ಥಾನವನ್ನು ಯಾರು ತುಂಬಲಿದ್ದಾರೆ ಎಂಬ ಚರ್ಚೆ ಜೋರಾಗಿದೆ.

ಈ ಪಾತ್ರಕ್ಕೆ ನಟಿ ಸಾಯಿ ಪಲ್ಲವಿ ಆಯ್ಕೆಯಾಗಬಹುದು ಎಂಬ ಮಾತುಗಳು ಕೇಳಿಬರುತ್ತಿವೆ. ಆದರೆ ಈ ಕುರಿತು ಚಿತ್ರತಂಡದಿಂದ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲ.

ಇದೇ ವೇಳೆ, ಕಲ್ಕಿ 2 ಚಿತ್ರದಲ್ಲಿ ಪ್ರಭಾಸ್ ಪಾತ್ರಕ್ಕೆ ಇನ್ನಷ್ಟು ಪ್ರಾಮುಖ್ಯತೆ ನೀಡಲಾಗಿದ್ದು, ಕಥೆಯು ಮೊದಲ ಭಾಗಕ್ಕಿಂತ ದೊಡ್ಡ ಮಟ್ಟದಲ್ಲಿ ಸಾಗಲಿದೆ ಎನ್ನಲಾಗಿದೆ. ಹೀಗಾಗಿ ಸುಮತಿ ಪಾತ್ರವೂ ಕಥೆಯ ಪ್ರಮುಖ ಭಾಗವಾಗಿರುವ ಕಾರಣ, ಆ ಪಾತ್ರವನ್ನು ಯಾರು ನಿರ್ವಹಿಸುತ್ತಾರೆ ಎಂಬುದರ ಮೇಲೆ ಅಭಿಮಾನಿಗಳ ಗಮನ ನೆಟ್ಟಿದೆ.

ಸಾಯಿ ಪಲ್ಲವಿ ಹೆಸರು ಕೇಳಿಬರುತ್ತಿರುವುದಕ್ಕೆ ಪ್ರಮುಖ ಕಾರಣ ಅವರ ಅಭಿನಯ ಸಾಮರ್ಥ್ಯ. ಭಾವನಾತ್ಮಕ ಹಾಗೂ ಪ್ರಬಲ ಪಾತ್ರಗಳಿಗೆ ಜೀವ ತುಂಬುವ ಸಾಮರ್ಥ್ಯ ಹೊಂದಿರುವ ಸಾಯಿ ಪಲ್ಲವಿ, ಸುಮತಿ ಪಾತ್ರಕ್ಕೆ ಸೂಕ್ತ ಆಯ್ಕೆಯಾಗಬಹುದು ಎಂಬ ಅಭಿಪ್ರಾಯವೂ ಸಿನಿ ವಲಯದಲ್ಲಿ ಕೇಳಿಬರುತ್ತಿದೆ.

**ನಾಗ್ ಅಶ್ವಿನ್ ಹೇಳಿದ್ದೇನು?:** ಸುಮತಿ ಪಾತ್ರದ ಬಗ್ಗೆ ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ನಿರ್ದೇಶಕ ನಾಗ್ ಅಶ್ವಿನ್, "ಸುಮತಿ ಪಾತ್ರ ಕಲ್ಕಿ 2 ಸಿನಿಮಾದಲ್ಲೂ ಮುಂದುವರಿಯಲಿದೆ. ಆ ಪಾತ್ರವನ್ನು ಯಾರು ಮಾಡುತ್ತಾರೆ ಎಂಬುದಕ್ಕೆ ಶೀಘ್ರದಲ್ಲೇ ಉತ್ತರ ಸಿಗಲಿದೆ. ಆದರೆ ಯಾರೋ ಒಬ್ಬರು ಆ ಪಾತ್ರವನ್ನು ಮಾಡುತ್ತಾರೆ" ಎಂದು ಹೇಳಿದ್ದಾರೆ.

ನಾಗ್ ಅಶ್ವಿನ್ ಅವರ ಈ ಹೇಳಿಕೆ ಅಭಿಮಾನಿಗಳ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದ್ದು, ಸಾಯಿ ಪಲ್ಲವಿ ಹೆಸರು ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ಕೇಳಿಬರುತ್ತಿದೆ.

ಇದೀಗ ದೀಪಿಕಾ ಪಡುಕೋಣೆ ಮತ್ತೆ ಚಿತ್ರತಂಡ ಸೇರಿಕೊಳ್ಳಲಿದ್ದಾರಾ ಅಥವಾ ಸಾಯಿ ಪಲ್ಲವಿ ಸೇರಿದಂತೆ ಮತ್ತೊಬ್ಬ ನಟಿ ಸುಮತಿ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರಾ ಎಂಬುದು ಮುಂದಿನ ದಿನಗಳಲ್ಲಿ ಬಹಿರಂಗವಾಗಲಿದೆ.

ಒಟ್ಟಾರೆ, 'ಕಲ್ಕಿ 2' ಸಿನಿಮಾದ ಸುಮತಿ ಪಾತ್ರಕ್ಕೆ ಯಾರು ಆಯ್ಕೆಯಾಗಲಿದ್ದಾರೆ ಎಂಬುದು ಸದ್ಯ ಸಿನಿಪ್ರಿಯರ ಕುತೂಹಲದ ವಿಷಯವಾಗಿದ್ದು, ಚಿತ್ರತಂಡದ ಅಧಿಕೃತ ಘೋಷಣೆಯತ್ತ ಎಲ್ಲರ ಚಿತ್ತ ನೆಟ್ಟಿದೆ.





# ಹೀರೋ ಆದ ಬಿಗ್ ಬಾಸ್ ವಿನ್ನರ್ ಗಿಲ್ಲಿ ನಟ; ಕೈ ಜೋಡಿಸಿದ ಕೆವಿಎನ್ ಪ್ರೊಡಕ್ಷನ್ಸ್

**ಬೆಂಗಳೂರು:** 'ಬಿಗ್ ಬಾಸ್ ಕನ್ನಡ ಸೀಸನ್ 12' ಮೂಲಕ ಮನೆಮಾತಾದ ಗಿಲ್ಲಿ ನಟ ಇದೀಗ ನಾಯಕ ನಟನಾಗಿ ಕನ್ನಡ ಚಿತ್ರರಂಗದಲ್ಲಿ ಹೊಸ ಅಧ್ಯಾಯ ಆರಂಭಿಸಲು ಸಜ್ಜಾಗಿದ್ದಾರೆ. ಈಗಾಗಲೇ ಹಲವು ಸಿನಿಮಾಗಳಲ್ಲಿ ತಮ್ಮ ನಟನೆಯ ಮೂಲಕ ಗಮನ ಸೆಳೆದಿರುವ ಅವರು, ಮೊದಲ ಬಾರಿಗೆ ಪೂರ್ಣ ಪ್ರಮಾಣದ ಹೀರೋ ಆಗಿ ಪ್ರೇಕ್ಷಕರ ಮುಂದೆ ಬರಲಿದ್ದು, ಅವರ ಹೊಸ ಚಿತ್ರಕ್ಕೆ ಖ್ಯಾತ ನಿರ್ಮಾಣ ಸಂಸ್ಥೆ 'ಕೆವಿಎನ್ ಪ್ರೊಡಕ್ಷನ್ಸ್' ಬೆಂಬಲ ನೀಡಿರುವುದು ಸಿನಿರಂಗದಲ್ಲಿ ಕುತೂಹಲ ಮೂಡಿಸಿದೆ.

ವಿಶೇಷವೆಂದರೆ, ಕನ್ನಡ ಮಾತ್ರವಲ್ಲದೆ ದಕ್ಷಿಣ ಭಾರತೀಯ ಚಿತ್ರರಂಗದಲ್ಲಿಯೂ ಭಾರೀ ನಿರೀಕ್ಷೆ ಮೂಡಿಸಿರುವ 'ಜನ ನಾಯಗನ್' ಹಾಗೂ 'ಟಾಕ್ಸಿಕ್'ನಂತಹ ದೈತ್ಯ ಚಿತ್ರಗಳಿಗೆ ನಿರ್ಮಾಣ ಅಥವಾ ಬೆಂಬಲ ನೀಡಿರುವ ಕೆವಿ-ಎನ್ ಪ್ರೊಡಕ್ಷನ್ಸ್ ಸಂಸ್ಥೆಯು ಇದೀಗ ಗಿಲ್ಲಿ ನಟನ ಚೊಚ್ಚಲ ಹೀರೋ ಚಿತ್ರಕ್ಕೂ ಸಾಥ್ ನೀಡುತ್ತಿದೆ. ಇದರಿಂದ ಈ ಸಿನಿಮಾ ಆರಂಭದಲ್ಲೇ ಭಾರೀ ನಿರೀಕ್ಷೆ ಹುಟ್ಟಿಸಿದೆ.

**ಇನ್ನೂ ಅಂತಿಮವಾಗದ ಚಿತ್ರದ ಶೀರ್ಷಿಕೆ:** ಗಿಲ್ಲಿ ನಟ ಅಭಿನಯದ ಈ ಹೊಸ ಸಿನಿಮಾಗೆ ಇನ್ನೂ ಅಧಿಕೃತವಾಗಿ ಶೀರ್ಷಿಕೆ ಅಂತಿಮಗೊಂಡಿಲ್ಲ. ಆದರೆ ಚಿತ್ರದ ಕಥೆ, ಕಲಾವಿದರು ಹಾಗೂ ತಾಂತ್ರಿಕ ಬಳಗದ ಬಗ್ಗೆ ಚಿತ್ರತಂಡ ಹಂತ ಹಂತವಾಗಿ ಮಾಹಿತಿ ನೀಡಲು ಸಿದ್ಧತೆ ನಡೆಸಿದೆ.

ಈ ಚಿತ್ರವನ್ನು 'ಕೆವಿಎನ್ ಪ್ರೊಡಕ್ಷನ್ಸ್' ಸಂಸ್ಥೆ ಅರ್ಪಿಸುತ್ತಿದ್ದು, ಸಂಸ್ಥೆಯ ಕಾರ್ಯಕಾರಿ ನಿರ್ಮಾಪಕರಾದ ನವೀನ್ ಮತ್ತು ಹರೀಶ್ ಮೊದಲ ಬಾರಿಗೆ ನಿರ್ಮಾಪಕರಾಗಿ ಚಿತ್ರ ನಿರ್ಮಾಣದ ಜವಾಬ್ದಾರಿ ಹೊತ್ತಿದ್ದಾರೆ. ಕೆವಿಎನ್ ಪ್ರೊಡಕ್ಷನ್ಸ್ ಸಂಸ್ಥಾಪಕ ಕೆ. ವೆಂಕಟ ನಾರಾಯಣ ಹಾಗೂ ಬಿಸಿನೆಸ್ ಹೆಡ್ ಸುಪ್ರಿತ್ ಅವರ ಮಾರ್ಗದರ್ಶನದಲ್ಲಿ ಸಿನಿಮಾ ನಿರ್ಮಾಣವಾಗಲಿದೆ.




**ಕಾಮಿಡಿ ಜೊತೆಗೆ ಮನರಂಜನೆಯ ಕಥೆ:** ಗಿಲ್ಲಿ ನಟ ಎಂದಾಕ್ಷಣ ಪ್ರೇಕ್ಷಕರು ಮೊದಲು ನೆನಪಿಸಿಕೊಳ್ಳುವುದು ಅವರ ಹಾಸ್ಯಪ್ರಜ್ಞೆ ಮತ್ತು ಮನರಂಜನಾ ಶೈಲಿಯನ್ನು. ಇದೇ ಕಾರಣಕ್ಕೆ ಅವರ ಹೊಸ ಚಿತ್ರವೂ ಅಪ್ಪಟ ಕಾಮಿಡಿ ಕಥಾಹಂದರ ಹೊಂದಿರಲಿದೆ ಎಂದು ಚಿತ್ರತಂಡ ತಿಳಿಸಿದೆ.

ಹಾಸ್ಯಮಯ ಚಿತ್ರಗಳ ಮೂಲಕ ಪ್ರೇಕ್ಷಕರ ಮನಗೆದ್ದಿರುವ ನಿರ್ದೇಶಕ ಚಂದ್ರಮೋಹನ್ ಈ ಚಿತ್ರಕ್ಕೆ ಆಕ್ಷನ್-ಕಟ್ ಹೇಳಲಿದ್ದು, ಮನರಂಜನೆಯ ಜೊತೆಗೆ ವಿಭಿನ್ನ ಕಥೆಯನ್ನು ಪ್ರೇಕ್ಷಕರ ಮುಂದೆ ತರುವ ಭರವಸೆ ನೀಡಿದ್ದಾರೆ. ಗಿಲ್ಲಿಯ ಇಮೇಜ್‌ಗೆ ತಕ್ಕಂತೆ ಕಥೆಯನ್ನು ರೂಪಿಸಲಾಗಿದೆ ಎನ್ನಲಾಗಿದ್ದು, ಕುಟುಂಬ ಸಮೇತರಾಗಿ ವೀಕ್ಷಿಸಬಹುದಾದ ಚಿತ್ರವಾಗಿರಲಿದೆ ಎಂಬ ನಿರೀಕ್ಷೆ ಮೂಡಿದೆ.

**ಜೂನ್ 21ರಂದು ಚಿತ್ರಕ್ಕೆ ಮುಹೂರ್ತ:** ಚಿತ್ರದ ಮುಹೂರ್ತ ಸಮಾರಂಭ ಜೂನ್ 21ರಂದು ನಡೆಯಲಿದ್ದು, ಇದೇ ದಿನ ಗಿಲ್ಲಿ ನಟ ಅವರ ಜನ್ಮದಿನವೂ ಆಗಿರುವುದು ವಿಶೇಷ. ತಮ್ಮ ಹುಟ್ಟುಹಬ್ಬದ ದಿನವೇ ನಾಯಕ ನಟನಾಗಿ ಹೊಸ ಪಯಣ ಆರಂಭಿಸುತ್ತಿರುವುದು ಗಿಲ್ಲಿ ಅಭಿಮಾನಿಗಳಲ್ಲಿ ಸಂಭ್ರಮ ಹೆಚ್ಚಿಸಿದೆ.

ಚಿತ್ರತಂಡ ಈಗಾಗಲೇ ವಿಭಿನ್ನ ಶೈಲಿಯ ಪ್ರೋಮೋ ಬಿಡುಗಡೆ ಮಾಡಿ ಗಮನ ಸೆಳೆದಿದ್ದು, ಚಿತ್ರದ ಘೋಷಣೆಯನ್ನು ವಿಶೇಷವಾಗಿ ಮಾಡಿದೆ. ಪ್ರೋಮೋಗೆ ಅಭಿಮಾನಿಗಳಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ.

**ಪಾತ್ರವರ್ಗದ ಬಗ್ಗೆ ಹೆಚ್ಚಿದ ಕುತೂಹಲ:** ಗಿಲ್ಲಿ ನಟನೊಂದಿಗೆ ಸಿನಿಮಾದಲ್ಲಿ ಯಾರೆಲ್ಲ ನಟಿಸಲಿದ್ದಾರೆ ಎಂಬುದು ಇನ್ನೂ ಬಹಿರಂಗವಾಗಿಲ್ಲ. ನಾಯಕಿ ಯಾರು? ಪ್ರಮುಖ ಪಾತ್ರಗಳಲ್ಲಿ ಯಾವ ಕಲಾವಿದರು ಕಾಣಿಸಿಕೊಳ್ಳಲಿದ್ದಾರೆ? ಎಂಬ ಕುತೂಹಲ ಅಭಿಮಾನಿಗಳಲ್ಲಿ ಹೆಚ್ಚಾಗಿದೆ.

ಚಿತ್ರತಂಡ ಶೀಘ್ರದಲ್ಲೇ ಉಳಿದ ಕಲಾವಿದರ ಹಾಗೂ ತಾಂತ್ರಿಕ ಬಳಗದ ವಿವರಗಳನ್ನು ಪ್ರಕಟಿಸುವ ಸಾಧ್ಯತೆಯಿದೆ.

**ಕೆ. ವೆಂಕಟ ನಾರಾಯಣರಿಂದ ಶುಭ ಹಾರೈಕೆ:** ಚಿತ್ರ ಘೋಷಣೆಯ ಅಂಗವಾಗಿ ಗಿಲ್ಲಿ ನಟ, ನಿರ್ದೇಶಕ ಚಂದ್ರಮೋಹನ್, ನಿರ್ಮಾಪಕರಾದ ನವೀನ್ ಮತ್ತು ಹರೀಶ್ ಅವರು ಕೆವಿಎನ್ ಪ್ರೊಡಕ್ಷನ್ಸ್ ಸಂಸ್ಥಾಪಕ ಕೆ. ವೆಂಕಟ ನಾರಾಯಣ ಅವರನ್ನು ಭೇಟಿ ಮಾಡಿದರು.

ಈ ವೇಳೆ ಮಾತನಾಡಿದ ಕೆ. ವೆಂಕಟ ನಾರಾಯಣ, "ಹೀರೋ ಆಗಿ ನಟಿಸುತ್ತಿರುವ ಗಿಲ್ಲಿಯವರಿಗೆ ಅಭಿನಂದನೆಗಳು. ಈ ಕಥೆಯನ್ನು ನಾನು ಮೊದಲೇ ಕೇಳಿದ್ದೇನೆ. ಗಿಲ್ಲಿ ಅವರಿಗೆ ಈ ಪಾತ್ರ ಮತ್ತು ಕಥೆ ಚೆನ್ನಾಗಿ ಹೊಂದಿಕೆಯಾಗುತ್ತದೆ. ಪ್ರತಿಭೆ ಇರುವವರಿಗೆ ಕೆವಿಎನ್ ಪ್ರೊಡಕ್ಷನ್ಸ್ ಬೆಂಬಲ ಯಾವಾಗಲೂ ಇರುತ್ತದೆ" ಎಂದು ಶುಭ ಹಾರೈಸಿದರು.

**ಬಿಗ್ ಬಾಸ್‌ನಿಂದ ಬೆಳ್ಳಿತೆರೆಗೆ ಯಶಸ್ವಿ ಪಯಣ:** 'ಬಿಗ್ ಬಾಸ್ ಕನ್ನಡ ಸೀಸನ್ 12'ರಲ್ಲಿ ಟ್ರೋಫಿ ಗೆದ್ದು ಅಪಾರ ಅಭಿಮಾನಿ ಬಳಗವನ್ನು ಹೊಂದಿರುವ ಗಿಲ್ಲಿ ನಟ, ಈಗ ಬೆಳ್ಳಿತೆರೆಯಲ್ಲೂ ತಮ್ಮದೇ ಆದ ಸ್ಥಾನ ನಿರ್ಮಿಸಿಕೊಳ್ಳಲು ಸಜ್ಜಾಗಿದ್ದಾರೆ. ಹಾಸ್ಯ ಮತ್ತು ಮನರಂಜನೆಯ ಮೂಲಕ ಪ್ರೇಕ್ಷಕರ ಮನಗೆದ್ದಿರುವ ಅವರು, ಇದೀಗ ನಾಯಕ ನಟನಾಗಿ ಯಾವ ಮಟ್ಟಿಗೆ ಯಶಸ್ಸು ಕಾಣುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

ಒಟ್ಟಾರೆ, ಕೆವಿಎನ್ ಪ್ರೊಡಕ್ಷನ್ಸ್ ಬೆಂಬಲದಲ್ಲಿ ಗಿಲ್ಲಿ ನಟನ ಹೊಸ ಸಿನಿಮಾ ಘೋಷಣೆಯಾಗಿರುವುದು ಕನ್ನಡ ಚಿತ್ರರಂಗದಲ್ಲಿ ಹೊಸ ನಿರೀಕ್ಷೆ ಹುಟ್ಟಿಸಿದ್ದು, ಜೂನ್ 21ರಂದು ನಡೆಯಲಿರುವ ಮುಹೂರ್ತ ಸಮಾರಂಭದತ್ತ ಅಭಿಮಾನಿಗಳ ಚಿತ್ತ ನೆಟ್ಟಿದೆ.

# 80ನೇ ವಯಸ್ಸಿನಲ್ಲಿ 161 ಕಿ.ಮೀ ಪ್ರಯಾಣ ಮಾಡಿ ವೈಭವ್‌ನನ್ನು ಭೇಟಿಯಾದ ದಿಗ್ಗಜ ಕ್ರಿಕೆಟಿಗ

**ಡಂಬುಲ್ಲಾ:** ಭಾರತದ ಉದಯೋನ್ಮುಖ ಕ್ರಿಕೆಟ್ ಪ್ರತಿಭೆ, ಕೇವಲ 15 ವರ್ಷದ ವೈಭವ್ ಸೂರ್ಯವಂಶಿ ಇದೀಗ ಭಾರತದಲ್ಲಷ್ಟೇ ಅಲ್ಲ, ವಿದೇಶಗಳಲ್ಲೂ ಅಪಾರ ಅಭಿಮಾನಿ ಬಳಗವನ್ನು ಹೊಂದಿದ್ದಾರೆ. ಭಾರತ ಎ ತಂಡದೊಂದಿಗೆ ಶ್ರೀಲಂಕಾ ಪ್ರವಾಸದಲ್ಲಿರುವ ವೈಭವ್ ಸೂರ್ಯವಂಶಿಯನ್ನು ಭೇಟಿ ಮಾಡಲು ಶ್ರೀಲಂಕಾದ ಮಾಜಿ ನಾಯಕ ಹಾಗೂ ದಿಗ್ಗಜ ಕ್ರಿಕೆಟಿಗ ಅನುರ ತೆನ್ನೆಕೂನ್ ಕ್ರೀಡಾಂಗಣಕ್ಕೆ ಆಗಮಿಸಿದ್ದು, ಇವರಿಬ್ಬರ ಭಾವನಾತ್ಮಕ ಭೇಟಿಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಭಾರತ ಎ ತಂಡ ಪ್ರಸ್ತುತ ಶ್ರೀಲಂಕಾದಲ್ಲಿ ನಡೆಯುತ್ತಿರುವ ತ್ರಿಕೋನ ಏಕದಿನ ಸರಣಿಯಲ್ಲಿ ಪಾಲ್ಗೊಂಡಿದ್ದು, ಈ ತಂಡದಲ್ಲಿ ವೈಭವ್ ಸೂರ್ಯವಂಶಿಗೂ ಅವಕಾಶ ನೀಡಲಾಗಿದೆ. ಇದುವರೆಗೆ ಈ ಪ್ರವಾಸದಲ್ಲಿ ಅವರ ಬ್ಯಾಟಿಂಗ್ ನಿರೀಕ್ಷಿತ ಮಟ್ಟದಲ್ಲಿ ಸದ್ದು ಮಾಡದಿದ್ದರೂ, ಅವರ ಆಟವನ್ನು ಕಣ್ತುಂಬಿಕೊಳ್ಳಲು ಅಭಿಮಾನಿಗಳು ಮೈದಾನಕ್ಕೆ ಬರುತ್ತಿರುವುದು ವಿಶೇಷವಾಗಿದೆ.

**ವೈಭವ್‌ಗಾಗಿ 161 ಕಿಲೋಮೀಟರ್ ಪ್ರಯಾಣಿಸಿದ ಲಂಕಾ ದಿಗ್ಗಜ:** ಈ ಕಥೆಯ ವಿಶೇಷವೆಂದರೆ, ಶ್ರೀಲಂಕಾದ ಮಾಜಿ ನಾಯಕ ಅನುರ ತೆನ್ನೆಕೂನ್ ಅವರು ವೈಭವ್ ಸೂರ್ಯವಂಶಿಯನ್ನು ಭೇಟಿಯಾಗಲು ಕೊಲಂಬೊದಿಂದ ಡಂಬುಲ್ಲಾಗೆ ಸುಮಾರು 161 ಕಿಲೋಮೀಟರ್ ಪ್ರಯಾಣಿಸಿದ್ದರು ಎನ್ನಲಾಗಿದೆ.

80 ವರ್ಷದ ಅನುರ ತೆನ್ನೆಕೂನ್ ಶ್ರೀಲಂಕಾ ಏಕದಿನ ತಂಡದ ಮೊದಲ ನಾಯಕರಲ್ಲಿ ಒಬ್ಬರಾಗಿದ್ದು, ಯುವ ಪ್ರತಿಭೆ ವೈಭವ್ ಅವರ ಆಟದಿಂದ ಪ್ರಭಾವಿತರಾಗಿದ್ದಾರೆ. ಪಂದ್ಯದ ಬಳಿಕ ಡ್ರೆಸ್ಸಿಂಗ್ ರೂಮ್‌ನಿಂದ ಹೊರಬಂದ ವೈಭವ್, ಅನುರ ಅವರನ್ನು ಭೇಟಿಯಾಗಿ ಕೆಲ ಸಮಯ ಮಾತುಕತೆ ನಡೆಸಿದರು.

ಇದೇ ವೇಳೆ ವೈಭವ್ ಸೂರ್ಯವಂಶಿ ಹಿರಿಯ ಕ್ರಿಕೆಟಿಗರ ಪಾದಗಳನ್ನು ಮುಟ್ಟಿ ಆಶೀರ್ವಾದ ಪಡೆದ ಕ್ಷಣ ಅಭಿಮಾನಿಗಳ



ಮನಗೆದ್ದಿದೆ. ಈ ವಿಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ವೈರಲ್ ಆಗಿದೆ.

**"ನಿನ್ನ ಆಟದ ಮೇಲೆ ಗಮನಕೊಡು":** ವೈಭವ್‌ಗೆ ಸಲಹೆ ನೀಡಿದ ಅನುರ ತೆನ್ನೆಕೂನ್, "ನಿನ್ನ ಆಟದ ಮೇಲೆ ಗಮನಹರಿಸು. ಹೊರಗಿನ ವಿಚಾರಗಳನ್ನು ಕಡೆಗಣಿಸು. ಪ್ರತಿಯೊಂದು ದಿನವೂ ನಮ್ಮದಾಗುವುದಿಲ್ಲ. ಕೆಲವೊಮ್ಮೆ ಲಯ ಸಿಗುವುದಿಲ್ಲ, ಅದು ಆಟದ ಒಂದು ಭಾಗ" ಎಂದು ಕಿವಿಮಾತು ಹೇಳಿದರು.

ಇದನ್ನು ಗಮನವಿಟ್ಟು ಆಲಿಸಿದ ವೈಭವ್ ಸೂರ್ಯವಂಶಿ ಮೌನವಾಗಿ ತಲೆಯಾಡಿಸಿ ಹಿರಿಯ ಆಟಗಾರರ ಮಾತುಗಳನ್ನು ಸ್ವೀಕರಿಸಿದರು.

**ಐಪಿಎಲ್‌ನಲ್ಲಿ ವೈಭವ್ ಆಟಕ್ಕೆ ಫಿದಾ:** ನಂತರ ಮಾತನಾಡಿದ ಅನುರ ತೆನ್ನೆಕೂನ್, "ಐಪಿಎಲ್‌ನಲ್ಲಿ ವೈಭವ್ ಬ್ಯಾಟಿಂಗ್ ನೋಡಿ ನಾನು ತುಂಬಾ ಪ್ರಭಾವಿತನಾಗಿದ್ದೆ. ಅವರು ಸಿಕ್ಸರ್ ಮತ್ತು ಬೌಂಡರಿಗಳನ್ನು ಬಾರಿಸುವ ರೀತಿ ನಿಜಕ್ಕೂ ಅದ್ಭುತವಾಗಿದೆ. ಮುಂದಿನ ದಿನಗಳಲ್ಲಿ ಅವರು ಇದೇ ರೀತಿ ಬೆಳೆಯಲಿ ಎಂಬುದು ನನ್ನ ಆಶಯ" ಎಂದು ಹೇಳಿದರು.

15 ವರ್ಷದ ಆಟಗಾರನೊಬ್ಬನ ಆಟ ಹಿರಿಯ ಕ್ರಿಕೆಟಿಗರನ್ನೇ ಸೆಳೆಯುತ್ತಿರುವುದು ವೈಭವ್ ಪ್ರತಿಭೆಗೆ ಸಾಕ್ಷಿಯಾಗಿದೆ.

**ಮೈದಾನದಲ್ಲೂ ಸುದ್ದಿಯಾದ ವೈಭವ್:** ಜೂನ್ 15ರಂದು ಡಂಬುಲ್ಲಾದಲ್ಲಿ ನಡೆದ ಭಾರತ ಎ ಹಾಗೂ ಶ್ರೀಲಂಕಾ ಎ ನಡುವಿನ ಪಂದ್ಯದಲ್ಲೂ ವೈಭವ್ ಸುದ್ದಿಯಾಗಿದ್ದರು. ಬ್ಯಾಟಿಂಗ್ ವೇಳೆ ಅವರು 14 ಎಸೆತಗಳಲ್ಲಿ ಒಂದು ಸಿಕ್ಸರ್ ಮತ್ತು ಮೂರು ಬೌಂಡರಿಗಳ ನೆರವಿನಿಂದ 21 ರನ್ ಗಳಿಸಿ ಔಟಾದರು.

ಇದೇ ಪಂದ್ಯದಲ್ಲಿ ಶ್ರೀಲಂಕಾ ಎ ಆಟಗಾರರೊಂದಿಗೆ ಮೈದಾನದಲ್ಲಿ ವೈಭವ್ ವಾಗ್ವಾದ ನಡೆಸಿದ ವಿಡಿಯೋ ಕೂಡ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು.

**ಪಂದ್ಯ ಟೈ, ಸೂಪರ್ ಓವರ್‌ನಲ್ಲಿ ಭಾರತದ ಸೋಲು:** ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ಎ ತಂಡ 50 ಓವರ್‌ಗಳಲ್ಲಿ 265 ರನ್ ಗಳಿಸಿತು. ಗುರಿ ಬೆನ್ನಟ್ಟಿದ ಶ್ರೀಲಂಕಾ ಎ ತಂಡವೂ 265 ರನ್ ಗಳಿಸಿ ಪಂದ್ಯವನ್ನು ಟೈಗೆ ಕೊಂಡೊಯ್ದಿತು.

ಬಳಿಕ ನಡೆದ ಸೂಪರ್ ಓವರ್‌ನಲ್ಲಿ ಶ್ರೀಲಂಕಾ ಎ ಮೇಲುಗೈ ಸಾಧಿಸಿ ಪಂದ್ಯ ಗೆದ್ದರೆ, ಭಾರತ ಎ ತಂಡ ಸೋಲನ್ನು ಅನುಭವಿಸಿತು.

ಒಟ್ಟಾರೆ, ಕೇವಲ 15ನೇ ವಯಸ್ಸಿನಲ್ಲೇ ಅಂತರರಾಷ್ಟ್ರೀಯ ಮಟ್ಟದ ದಿಗ್ಗಜರ ಮೆಚ್ಚುಗೆ ಮತ್ತು ಆಶೀರ್ವಾದ ಪಡೆಯುತ್ತಿರುವ ವೈಭವ್ ಸೂರ್ಯವಂಶಿ ಭಾರತೀಯ ಕ್ರಿಕೆಟ್‌ನ ಭವಿಷ್ಯದ ಭರವಸೆಯ ತಾರೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದಾರೆ.

# ಬಾಸ್ ಚಿತ್ರಕ್ಕೆ ಮತ್ತೆ ಸಂಕಷ್ಟ: ಹೈಕೋರ್ಟ್ ಮೊರೆ ಹೋದ ದರ್ಶನ್

**ಬೆಂಗಳೂರು:** ಸಿನಿಮಾ ಬಿಡುಗಡೆಯ ಹೊಸ್ತಿಲಲ್ಲಿರುವ ಸಂದರ್ಭದಲ್ಲಿ 'ಬಾಸ್' ಸಿನಿಮಾಗೆ ಮತ್ತೊಮ್ಮೆ ಕಾನೂನು ಅಡ್ಡಿ ಎದುರಾಗಿದ್ದು, ಪ್ರಕರಣ ಇದೀಗ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದೆ. ಜೂನ್ 19ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿರುವ 'ಬಾಸ್' ಚಿತ್ರಕ್ಕೆ ಮತ್ತೊಮ್ಮೆ ಕಾನೂನು ಸಂಕಷ್ಟ ಎದುರಾಗಿದೆ. ನಟ ದರ್ಶನ್ ಹಾಗೂ ವಿಜಯಲಕ್ಷ್ಮೀ ದರ್ಶನ್ ಅವರು ಚಿತ್ರದ ಬಿಡುಗಡೆಗೆ ತಡೆ ನೀಡುವಂತೆ ಕೋರಿ ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿಯು ಚಿತ್ರರಂಗದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ಈ ಹಿಂದೆ ನಗರ ಸಿವಿಲ್ ನ್ಯಾಯಾಲಯವು 'ಬಾಸ್' ಚಿತ್ರದ ಬಿಡುಗಡೆಗೆ ಮಧ್ಯಂತರ ತಡೆಯಾಜ್ಞೆ ವಿಧಿಸಿತ್ತು. ಆದರೆ ನಂತರ ಆ ತಡೆಯಾಜ್ಞೆಯನ್ನು ತೆರವುಗೊಳಿಸಿ ಚಿತ್ರ ಬಿಡುಗಡೆಗೆ ಅವಕಾಶ ನೀಡುವಂತೆ ಆದೇಶ ಹೊರಡಿಸಿತ್ತು. ನ್ಯಾಯಾಲಯದ ಈ ಆದೇಶದ ಬಳಿಕ ಚಿತ್ರತಂಡ ಜೂನ್ 19ರಂದು ರಾಜ್ಯಾದ್ಯಂತ ಚಿತ್ರವನ್ನು ಬಿಡುಗಡೆ ಮಾಡುವುದಾಗಿ ಅಧಿಕೃತವಾಗಿ ಘೋಷಿಸಿತ್ತು.

ಆದರೆ ಸಿವಿಲ್ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ದರ್ಶನ್ ಮತ್ತು ವಿಜಯಲಕ್ಷ್ಮೀ ದರ್ಶನ್ ಅವರು ಇದೀಗ ಕರ್ನಾಟಕ ಹೈಕೋರ್ಟ್ ಮೊರೆ ಹೋಗಿದ್ದಾರೆ. ತಮ್ಮ ಅರ್ಜಿಯಲ್ಲಿ ಚಿತ್ರದ ಕಥಾವಸ್ತು, ಪಾತ್ರಗಳ ನಿರೂಪಣೆ ಸೇರಿದಂತೆ ಕೆಲವು ವಿವಾದಿತ ಅಂಶಗಳ ಕುರಿತು ಗಂಭೀರ ಆಕ್ಷೇಪಣೆಗಳನ್ನು ದಾಖಲಿಸಿರುವುದಾಗಿ ತಿಳಿದುಬಂದಿದೆ. ಚಿತ್ರದ ಬಿಡುಗಡೆಗೆ ತಕ್ಷಣ ಮಧ್ಯಂತರ ತಡೆಯಾಜ್ಞೆ ನೀಡುವಂತೆ ಅವರು ಹೈಕೋರ್ಟ್‌ಗೆ ಮನವಿ ಮಾಡಿದ್ದಾರೆ.

ಚಿತ್ರ ಬಿಡುಗಡೆಯ ದಿನಾಂಕ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಈ ಪ್ರಕರಣ ಮಹತ್ವ ಪಡೆದುಕೊಂಡಿದೆ. ಹೈಕೋರ್ಟ್ ಯಾವ ರೀತಿಯ ಆದೇಶ ನೀಡಲಿದೆ ಎಂಬುದರ ಬಗ್ಗೆ ಚಿತ್ರರಂಗದಲ್ಲಿ ಕುತೂಹಲ ಮೂಡಿದೆ. ಮಧ್ಯಂತರ ತಡೆಯಾಜ್ಞೆ ನೀಡಿದರೆ ಚಿತ್ರದ ಬಿಡುಗಡೆ ಮತ್ತೊಮ್ಮೆ ಮುಂದೂಡಿಕೆಯಾಗುವ ಸಾಧ್ಯತೆ ಇದೆ. ಮತ್ತೊಂದೆಡೆ, ಹೈಕೋರ್ಟ್ ಚಿತ್ರ ಬಿಡುಗಡೆಗೆ ಅನುಮತಿ ನೀಡಿದರೆ ಜೂನ್ 19ರಂದು ನಿಗದಿಯಂತೆ ಚಿತ್ರ ತೆರೆಗೆ ಬರಲಿದೆ.

'ಬಾಸ್' ಚಿತ್ರದ ಕುರಿತಾಗಿ ಈಗಾಗಲೇ ಸಾಕಷ್ಟು ಚರ್ಚೆಗಳು ಮತ್ತು ವಿವಾದಗಳು ನಡೆದಿದ್ದು, ಈ ಹೊಸ ಕಾನೂನು ಬೆಳವಣಿಗೆ ಚಿತ್ರದ ಮೇಲಿನ ಗಮನವನ್ನು ಇನ್ನಷ್ಟು ಹೆಚ್ಚಿಸಿದೆ. ಅಭಿಮಾನಿಗಳು ಹಾಗೂ ಚಿತ್ರರಂಗದ ವಲಯಗಳು ಹೈಕೋರ್ಟ್‌ನ ನಿರ್ಧಾರಕ್ಕಾಗಿ ಕಾತರದಿಂದ ಕಾಯುತ್ತಿವೆ.

ಈ ಪ್ರಕರಣದಿಂದಾಗಿ ಚಿತ್ರದ ನಿರ್ಮಾಪಕರು, ವಿತರಕರು ಹಾಗೂ ಪ್ರದರ್ಶಕರಲ್ಲೂ ಅನಿಶ್ಚಿತತೆ ಮನೆ ಮಾಡಿದೆ. ಚಿತ್ರ ಬಿಡುಗಡೆಯ ಸಿದ್ಧತೆಗಳು ಭರದಿಂದ ಸಾಗುತ್ತಿರುವ ಹೊತ್ತಿನಲ್ಲಿ ಕಾನೂನು ತೊಡಕು ಎದುರಾಗಿರುವುದು ಚಿತ್ರತಂಡಕ್ಕೆ ತಲೆನೋವಾಗಿ ಪರಿಣಮಿಸಿದೆ ಎನ್ನಲಾಗುತ್ತಿದೆ.

ಇದೇ ವೇಳೆ, ಸಾಮಾಜಿಕ ಜಾಲತಾಣಗಳಲ್ಲೂ 'ಬಾಸ್' ಸಿನಿಮಾ ಕುರಿತ ಚರ್ಚೆಗಳು ಜೋರಾಗಿದ್ದು, ನ್ಯಾಯಾಲಯದ ತೀರ್ಪು ಯಾವ ದಿಕ್ಕಿನಲ್ಲಿ ಬರಲಿದೆ ಎಂಬ ಕುತೂಹಲ ಅಭಿಮಾನಿಗಳಲ್ಲಿ ಹೆಚ್ಚಾಗಿದೆ. ಹೈಕೋರ್ಟ್‌ನ ಮುಂದಿನ ವಿಚಾರಣೆ ಮತ್ತು ಆದೇಶದತ್ತ ಚಿತ್ರರಂಗದ ಚಿತ್ತ ನೆಟ್ಟಿದೆ.

ಒಟ್ಟಾರೆ, ಜೂನ್ 19ರಂದು ಬಿಡುಗಡೆಯಾಗಬೇಕಿರುವ 'ಬಾಸ್' ಚಿತ್ರದ ಭವಿಷ್ಯ ಇದೀಗ ಕರ್ನಾಟಕ ಹೈಕೋರ್ಟ್‌ನ ತೀರ್ಪಿನ ಮೇಲೆ ನಿಂತಿದ್ದು, ಮುಂದಿನ ಕೆಲ ದಿನಗಳಲ್ಲಿ ಹೊರಬೀಳುವ ನ್ಯಾಯಾಲಯದ ಆದೇಶ ಚಿತ್ರ ಬಿಡುಗಡೆಯ ದಿಕ್ಕನ್ನು ನಿರ್ಧರಿಸಲಿದೆ.

ಇದಾದ ನಡುವೆ, ಚಿತ್ರ ಬಿಡುಗಡೆಗೆ ಕೇವಲ ಕೆಲವೇ ದಿನಗಳು ಬಾಕಿ ಇರುವ ಸಂದರ್ಭದಲ್ಲಿ ಹೈಕೋರ್ಟ್‌ನಲ್ಲಿ ನಡೆಯಲಿರುವ ವಿಚಾರಣೆ ಮಹತ್ವ ಪಡೆದಿದೆ. ನ್ಯಾಯಾಲಯ ಮಧ್ಯಂತರ ಆದೇಶ ನೀಡುವವರೆಗೂ ಚಿತ್ರತಂಡ ಮತ್ತು ಅಭಿಮಾನಿಗಳು ಕಾದು ನೋಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, 'ಬಾಸ್' ಸಿನಿಮಾ ನಿಗದಿತ ದಿನಾಂಕದಂದು ತೆರೆಗೆ ಬರುತ್ತದೆಯೇ ಅಥವಾ ಮತ್ತೊಮ್ಮೆ ಕಾನೂನು ತೊಡಕಿನಿಂದ ಬಿಡುಗಡೆ ಮುಂದೂಡಿಕೆಯಾಗುತ್ತದೆಯೇ ಎಂಬುದು ಸದ್ಯದ ಬಹುದೊಡ್ಡ ಪ್ರಶ್ನೆಯಾಗಿದೆ